**ಕರ್ನಾಟಕ ಸರ್ಕಾರ**
**ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ**

ಸಂಖ್ಯೆ : ಕಾಶಿಇ/ಶೈವಿ/90/ಪ್ರೇರಣಾ/2024-25

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ
ಶೇಷಾದ್ರಿ ರಸ್ತೆ, ಬೆಂಗಳೂರು – 560001.
ದಿನಾಂಕ : 05.10.2024.

## ಸುತ್ತೋಲೆ

**ವಿಷಯ:** ಎಲ್ಲಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳು, ಸರ್ಕಾರಿ ಪಾಲಿಟೆಕ್ನಿಕ್ ಹಾಗೂ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳಲ್ಲಿ **'ಪ್ರೇರಣಾ'** ಆನ್‌ಲೈನ್ ವೇದಿಕೆಯನ್ನು ಬಳಸಿ ನೋಂದಾಯಿತ ಸಂಪನ್ಮೂಲ ವ್ಯಕ್ತಿಗಳಿಂದ ಕಾರ್ಯಕ್ರಮಗಳನ್ನು ಆಯೋಜಿಸುವ ಕುರಿತು.

**ಉಲ್ಲೇಖ :** ಸರ್ಕಾರದ ಆದೇಶ ಸಂಖ್ಯೆ : ಇಡಿ 44 ಹೆಚ್‌ಪಿಟಿ 2024, ಬೆಂಗಳೂರು, ದಿನಾಂಕ : 07.06.2024.

*****

ಉಲ್ಲೇಖಿತ ಸರ್ಕಾರದ ಆದೇಶದಲ್ಲಿ, 2024-25ನೇ ಸಾಲಿನ ಆಯವ್ಯಯ ಘೋಷಣೆಯಂತೆ 'ಪ್ರೇರಣಾ' Mentorship ಕಾರ್ಯಕ್ರಮವನ್ನು ಸರ್ಕಾರಿ ಪಾಲಿಟೆಕ್ನಿಕ್ಗಳು, ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳು ಹಾಗೂ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಪ್ರಸ್ತುತ ಶೈಕ್ಷಣಿಕ ವರ್ಷದಲ್ಲಿ ಅನುಷ್ಠಾನಗೊಳಿಸಲು ಉದ್ದೇಶಿಸಲಾಗಿದೆ. ವಿಷಯ ತಜ್ಞರು, ನಾಗರಿಕ ಸೇವಾ ಅಧಿಕಾರಿಗಳು, ವಿಜ್ಞಾನ, ತಂತ್ರಜ್ಞಾನ, ವೈದ್ಯಕೀಯ, ಕೃಷಿ, ಕಲೆ ಇತ್ಯಾದಿ ಕ್ಷೇತ್ರಗಳಲ್ಲಿ ಗಮನಾರ್ಹ ಸಾಧನೆ ಮಾಡಿರುವ ಸಾಧಕರು ಮತ್ತು ಉದ್ಯಮಿಗಳು ಸಂಪನ್ಮೂಲ ವ್ಯಕ್ತಿಗಳಾಗಿ ಸರ್ಕಾರಿ ಉನ್ನತ ಶಿಕ್ಷಣ ಸಂಸ್ಥೆಗಳ ವಿದ್ಯಾರ್ಥಿಗಳಿಗೆ ಉಪನ್ಯಾಸ, ವಿಚಾರ ಸಂಕಿರಣ, ಕಾರ್ಯಾಗಾರ, ಸಂಶೋಧನೆಗೆ ಸ್ಫೂರ್ತಿ ಇತ್ಯಾದಿ ಕಾರ್ಯಕ್ರಮಗಳನ್ನು ನಡೆಸಿಕೊಡುವ ಮೂಲಕ ಮಾರ್ಗದರ್ಶನ ನೀಡಲು ಅನುಕೂಲವಾಗುವಂತೆ ಈ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಲಾಗುತ್ತಿದೆ.

**ಸದರಿ ಕಾರ್ಯಕ್ರಮದ ವಿವರಗಳು ಈ ಕೆಳಗಿನಂತಿವೆ:**

- ಪ್ರೇರಣಾ ಕಾರ್ಯಕ್ರಮಕ್ಕೆ ಸಂಬಂಧಪಟ್ಟಂತೆ ಕಾಲೇಜು ಶಿಕ್ಷಣ ಇಲಾಖೆ ಮತ್ತು ತಾಂತ್ರಿಕ ಶಿಕ್ಷಣ ಇಲಾಖೆಗಳ ಕೇಂದ್ರ ಕಚೇರಿಗಳ ಮಟ್ಟದಲ್ಲಿ ಸಮನ್ವಯಾಧಿಕಾರಿಗಳು ಕಾರ್ಯ ನಿರ್ವಹಿಸುತ್ತಾರೆ.
- ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳು, ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳು ಹಾಗೂ ಸರ್ಕಾರಿ ಪಾಲಿಟೆಕ್ನಿಕ್‌ಗಳಲ್ಲಿ ಒಬ್ಬರು ಅಧ್ಯಾಪಕರನ್ನು ಕಾಲೇಜು/ಪಾಲಿಟೆಕ್ನಿಕ್ ಮಟ್ಟದ ಸಮನ್ವಯಾಧಿಕಾರಿಗಳನ್ನಾಗಿ ಪ್ರಾಂಶುಪಾಲರು ನೇಮಿಸತಕ್ಕದ್ದು.
- **ಆರ್ಥಿಕ ನೆರವು:** ಪ್ರೇರಣಾ ಕಾರ್ಯಕ್ರಮಗಳಿಗೆ ನಿಗದಿತ ಆರ್ಥಿಕ ನೆರವು ದೊರೆಯಲಿದ್ದು, ಸದರಿ ಮೊತ್ತವನ್ನು ಸಂಪನ್ಮೂಲ ವ್ಯಕ್ತಿಗಳ ಗೌರವಧನ, ಲಾಜಿಸ್ಟಿಕ್ಸ್ ಮತ್ತು ಸಂಬಂಧಪಟ್ಟ ಇತರ ಚಟುವಟಿಕೆಗಳಿಗೆ ಒದಗಿಸಲಾಗುವುದು. ಇದಕ್ಕೆ ಸಂಬಂಧಿಸಿದ ವಿವರವಾದ ಮಾರ್ಗಸೂಚಿಗಳನ್ನು ಹೊರಡಿಸಲಾಗುವುದು.
- **ಆನ್‌ಲೈನ್ ಪೋರ್ಟಲ್:** ಪ್ರೇರಣಾ ಮೆಂಟರ್‌ಶಿಪ್ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಲು ಅನುಕೂಲವಾಗುವಂತೆ **ಪ್ರೇರಣಾ ಆನ್‌ಲೈನ್ ಪೋರ್ಟಲ್** ಅನ್ನು ಅಭಿವೃದ್ಧಿಗೊಳಿಸಲಾಗಿದೆ.
- **ಪೋರ್ಟಲ್ ಲಿಂಕ್:** ಪ್ರೇರಣಾ ಪೋರ್ಟಲ್ ಲಿಂಕ್ ಕಾಲೇಜು ಶಿಕ್ಷಣ ಇಲಾಖೆ ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ ವೆಬ್ ಸೈಟ್ ಗಳಲ್ಲಿ ಲಭ್ಯವಿರುತ್ತದೆ.
  ಪೋರ್ಟಲ್ ಲಿಂಕ್: https://emis.karnataka.gov.in/prerana/PRERANA_Home_K.html

- **ಮೆಂಟರ್‌ಗಳು/ಸಂಪನ್ಮೂಲ ವ್ಯಕ್ತಿಗಳ ನೋಂದಣಿ**: ವಿವಿಧ ಕ್ಷೇತ್ರಗಳಲ್ಲಿ ಗಮನಾರ್ಹ ಸಾಧನೆ ಮಾಡಿ, ವಿದ್ಯಾರ್ಥಿಗಳಿಗೆ ಸ್ವ-ಇಚ್ಛೆಯಿಂದ ಮಾರ್ಗದರ್ಶನ ನೀಡಲು ಉತ್ಸುಕರಾಗಿರುವ ವಿಷಯ ತಜ್ಞರು, ನಾಗರಿಕ ಸೇವಾ ಅಧಿಕಾರಿಗಳು, ವಿಜ್ಞಾನ, ತಂತ್ರಜ್ಞಾನ, ವೈದ್ಯಕೀಯ, ಕೃಷಿ, ಕಲೆ ಇತ್ಯಾದಿ ಕ್ಷೇತ್ರಗಳಲ್ಲಿ ಗಮನಾರ್ಹ ಸಾಧನೆ ಮಾಡಿರುವ ಸಾಧಕರು ಮತ್ತು ಉದ್ಯಮಿಗಳು ಸಂಪನ್ಮೂಲ ವ್ಯಕ್ತಿಗಳಾಗಿ ಪ್ರೇರಣಾ ಪೋರ್ಟಲ್ ನಲ್ಲಿ ನೋಂದಾಯಿಸಿಕೊಳ್ಳುತ್ತಾರೆ.
- ಸಂಪನ್ಮೂಲ ವ್ಯಕ್ತಿಗಳು ಕಾರ್ಯಕ್ರಮವನ್ನು ನಡೆಸಿಕೊಡಲು ಬಯಸುವ ಉನ್ನತ ಶಿಕ್ಷಣ ಸಂಸ್ಥೆಯನ್ನು/ಗಳನ್ನು ಪ್ರೇರಣಾ ಪೋರ್ಟಲ್‌ನಲ್ಲಿ ಆಯ್ಕೆ ಮಾಡಬಹುದಾಗಿರುತ್ತದೆ.
- ಸಂಪನ್ಮೂಲ ವ್ಯಕ್ತಿಗಳು ಯಾವುದಾದರೂ ಸರ್ಕಾರಿ ಕಾಲೇಜು/ಪಾಲಿಟೆಕ್ನಿಕ್ ಅನ್ನು ಆಯ್ಕೆ ಮಾಡಿಕೊಂಡ ಕೂಡಲೇ ಆ ಕಾಲೇಜಿನ ಸಮನ್ವಯಾಧಿಕಾರಿಗಳಿಗೆ ಮೊಬೈಲ್ ಸಂದೇಶ ರವಾನೆಯಾಗುತ್ತದೆ.
- ಇದರ ಜೊತೆಗೆ ಕಾಲೇಜಿನ EMIS ಲಾಗಿನ್ ನಲ್ಲಿ ಸಂಪನ್ಮೂಲ ವ್ಯಕ್ತಿಯ ವಿವರಗಳು ಕಾಣಿಸಿಕೊಳ್ಳುತ್ತವೆ.
- ಸಂಪನ್ಮೂಲ ವ್ಯಕ್ತಿಗಳು ಆಯ್ಕೆ ಮಾಡಿಕೊಂಡ ಕಾಲೇಜು/ಪಾಲಿಟೆಕ್ನಿಕ್ ಮಟ್ಟದ ಸಮನ್ವಯಾಧಿಕಾರಿಗಳು ಮತ್ತು ಕೇಂದ್ರ ಕಚೇರಿಗಳ ಸಮನ್ವಯಾಧಿಕಾರಿಗಳೊಂದಿಗೆ ಸಮಾಲೋಚಿಸಿ, ಸಂಪನ್ಮೂಲ ವ್ಯಕ್ತಿಗಳನ್ನು ಸಂಪರ್ಕಿಸಿ, 4 ದಿನಗಳ ಒಳಗೆ ಕಾರ್ಯಕ್ರಮವನ್ನು ಆಯೋಜನೆ ಕುರಿತು ಕ್ರಮವಹಿಸುವುದು.
- ಸಂಪನ್ಮೂಲ ವ್ಯಕ್ತಿಗಳು ಮತ್ತು ವಿದ್ಯಾರ್ಥಿಗಳ ಸೌಕರ್ಯಕ್ಕೆ ಅನುಗುಣವಾಗಿ ಕಾರ್ಯಕ್ರಮವನ್ನು ಆನ್‌ಲೈನ್/ ಆಫ್‌ಲೈನ್/ ಹೈಬ್ರಿಡ್ ಪದ್ಧತಿಯಲ್ಲಿ ಆಯೋಜಿಸಬಹುದಾಗಿದೆ.
- ಕಾರ್ಯಕ್ರಮ ಪೂರ್ಣಗೊಂಡ ನಂತರ ಕಾಲೇಜಿನ EMIS ನಲ್ಲಿ ಕಾರ್ಯಕ್ರಮದ ವಿವರಗಳನ್ನು ಕಾಲೇಜು ಮಟ್ಟದ ಸಮನ್ವಯಾಧಿಕಾರಿಗಳು ನಮೂದಿಸತಕ್ಕದ್ದು.
- ಕಾರ್ಯಕ್ರಮದ ಕುರಿತು ಕಾಲೇಜು ಮಟ್ಟದ ಪ್ರೇರಣಾ ಸಮನ್ವಯಾಧಿಕಾರಿಗಳು ವಿದ್ಯಾರ್ಥಿಗಳಿಂದ ಹಿಮ್ಮಾಹಿತಿ ಪಡೆದು ಅನುಸರಣಾ ವರದಿಯೊಂದಿಗೆ ಸಂಬಂಧಪಟ್ಟ ಪ್ರಾದೇಶಿಕ ಜಂಟಿ ನಿರ್ದೇಶಕರ ಕಚೇರಿಗೆ ಸಲ್ಲಿಸತಕ್ಕದ್ದು.

**ಆಯುಕ್ತರು**
**ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ**

**ಇವರಿಗೆ :**

ಇಲಾಖಾ ವ್ಯಾಪ್ತಿಯ ಎಲ್ಲಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ, ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜುಗಳ ಹಾಗೂ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳ ಪ್ರಾಂಶುಪಾಲರುಗಳಿಗೆ – ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ.

**ಪ್ರತಿಯನ್ನು :**

1) ಜಂಟಿ ನಿರ್ದೇಶಕರು, ಪ್ರಾದೇಶಿಕ ಕಛೇರಿ, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು, ಮೈಸೂರು, ಮಂಗಳೂರು, ಶಿವಮೊಗ್ಗ, ಧಾರವಾಡ, ಕಲಬುರಗಿ- ಕಾಲೇಜುಗಳ ಮಾಹಿತಿಯನ್ನು ಪರಿಶೀಲಿಸಿ ಅಗತ್ಯ ಕ್ರಮವಹಿಸುವುದು.
2) ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು – 560 001.
3) ಮಾಹಿತಿ ತಂತ್ರಜ್ಞಾನ ಅಧಿಕಾರಿಗಳು, ಕೇಂದ್ರ ಕಛೇರಿ, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು – 01. (ಇಲಾಖೆಯ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು)
4) ಕಛೇರಿ ಪ್ರತಿ.